ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

8

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19, - ಶಾಸಕರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 12/4/21

# ಕುಮಠಳ್ಳಿಗೆ 2ನೇ ಬಾರಿ ಕೊರೊನಾ

13/4/21



**ಅಥಣಿ:** ಅಥಣಿ ಶಾಸಕ ಹಾಗೂ ಕೊಳಗೇರಿ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಮಹೇಶ ಕುಮಠಳ್ಳಿ ಅವರಿಗೆ ಎರಡನೇ ಬಾರಿ ಕೊವಿಡ್-19 ಸೋಂಕು ತಗುಲಿರುವುದು ದೃಢಪಟ್ಟಿದೆ. ಸಾಮಾಜಿಕ ಜಾಲತಾಣದಲ್ಲಿ 'ನನಗೆ ಕೊರೊನಾ ಸೊಂಕು ದೃಢಪಟ್ಟಿದೆ' ಎಂದು ಪೋಸ್ಟ್ ಮಾಡಿದ್ದಾರೆ. ಸೋಮವಾರ ಬೆಳಗ್ಗೆ ಕೋವಿಡ್ ಟೆಸ್ಟ್ ಮಾಡಿಸಿದ್ದು ಪಾಸಿಟಿವ್ ಎಂದು ದೃಢಪಟ್ಟಿದೆ. ವೈದ್ಯರ ಸಲಹೆಯಂತೆ ಆಸ್ಪತ್ರೆಗೆ ದಾಖಲಾಗಿದ್ದೇನೆ. ನನ್ನ ಸಂಪರ್ಕಕ್ಕೆ ಬಂದವರು ತಮ್ಮ ಆರೋಗ್ಯದ ಕಡೆಗೆ ನಿಗಾವಹಿಸಿ ಹಾಗೂ ಕೋವಿಡ್ ಟೆಸ್ಟ್ ಮಾಡಿಸಿಕೊಳ್ಳಲು ವಿನಂತಿಸುತ್ತೇನೆ. ಆದಷ್ಟು ಬೇಗ ಗುಣಮುಖನಾಗಿ ಬಂದು ಎಂದಿನಂತೆ ಕಾರ್ಯ ಪ್ರವೃತ್ತನಾಗಲಿದ್ದೇನೆ ಎಂದು ತಮ್ಮ ಫೇಸ್‌ಬುಕ್ ಪೇಜ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಇತ್ತೀಚೆಗೆ ಕೊರೊನಾ ಸೋಂಕು ತಗುಲಿದ್ದರಿಂದ ಚಿಕಿತ್ಸೆ ಪಡೆದು ಗುಣಮುಖರಾಗಿದ್ದರು.